# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಮಂಗಳವಾರ, ೧೦, ಫೆಬ್ರವರಿ, ೨೦೨೬ ( ಮಾಘ , ೨೧, ಶಕವರ್ಷ, ೧೯೪೭)<br>BENGALURU, TUESDAY, 10, FEBRUARY, 2026 ( MAGHA , 21, SHAKAVARSHA, 1947) | ನಂ. ೧೪೪<br>No. 144 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿಂತಾಮಣಿ ನಗರ ಯೋಜನಾ ಪ್ರಾಧಿಕಾರದ ಆಸ್ತಿ ಮತ್ತು ಹೊಣೆಗಾರಿಕೆಯನ್ನು ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗಾಯಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 08 ಬೆಂರೂಪ್ರಾ 2026(ಇ), ದಿನಾಂಕ:09.02.2026.

*****

**ಪ್ರಸ್ತಾವನೆ:-**

ಚಿಂತಾಮಣಿ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 261 ಬೆಂರೂಪ್ರಾ 2024, ಬೆಂಗಳೂರು, ದಿನಾಂಕ:27-11-2024 ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4 (ಎ)ರ ಉಪ ಕಲಂ (1) ರಲ್ಲಿ ಪ್ರದತ್ತವಾದ ಅಧಿಕಾರದನ್ವಯ, ಚಿಂತಾಮಣಿ ಪಟ್ಟಣದ ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶವನ್ನು ಘೋಷಿಸಿ ಚಿಂತಾಮಣಿ ಯೋಜನಾ ಪ್ರಾಧಿಕಾರದ ಎಲ್ಲೆಯನ್ನು ಪರಿಷ್ಕರಿಸಿ ನಿಗಧಿಪಡಿಸಲಾಗಿದೆ.

ಚಿಂತಾಮಣಿ ಪಟ್ಟಣವು ತಾಲ್ಲೂಕು ಕೇಂದ್ರ ಸ್ಥಾನವಾಗಿದ್ದು, ಚಿಂತಾಮಣಿ ಪಟ್ಟಣದ ಯೋಜನಾಬದ್ಧ ಬೆಳವಣಿಗೆಯ ಉದ್ದೇಶದಿಂದ ಹಾಗೂ ಸದರಿ ಪ್ರದೇಶದ ವ್ಯಾಪ್ತಿಯಲ್ಲಿನ ಅಭಿವೃದ್ಧಿಗಳನ್ನು ನಿಯಂತ್ರಿಸಲು ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರವನ್ನಾಗಿ ಪುನರ್ ರಚಿಸಲು ನಿರ್ಧರಿಸಿ, ಮೇಲೆ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ, ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಕಾಯ್ದೆ, 1987 (ಕರ್ನಾಟಕ ಕಾಯ್ದೆ 34)ರ ಕಲಂ 3ರ ಉಪ ಕಲಂ (1)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ದಿನಾಂಕ:09.02.2026 ರಿಂದ ಜಾರಿಗೆ ಬರುವಂತೆ ಚಿಂತಾಮಣಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯ ಅಭಿವೃದ್ಧಿಗಾಗಿ ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರವನ್ನು ರಚಿಸಿ ಆದೇಶಿಸಿದೆ.

ಚಿಂತಾಮಣಿ ನಗರ ಯೋಜನಾ ಪ್ರಾಧಿಕಾರವನ್ನು ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರವನ್ನಾಗಿ ರಚಿಸಿ ಆದೇಶಿಸಿರುವುದರಿಂದ, ಚಿಂತಾಮಣಿ ನಗರ ಯೋಜನಾ ಪ್ರಾಧಿಕಾರದ ವಶದಲ್ಲಿದ್ದ ಆಸ್ತಿ ಮತ್ತು ಹೊಣೆಗಾರಿಕೆಯನ್ನು ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ, ನಗರಾಭಿವೃದ್ಧಿ ಪ್ರಾಧಿಕಾರ ರಚಿತವಾದ ದಿನಾಂಕದಿಂದ ವರ್ಗಾಯಿಸುವ ಕುರಿತಂತೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



**<u>ಸರ್ಕಾರದ ಆದೇಶ ಸಂಖ್ಯೆ:ನಅಇ 08 ಬೆಂರೂಪ್ರಾ 2026(ಇ),</u>**
**<u>ಬೆಂಗಳೂರು, ದಿನಾಂಕ: 09.02.2026</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಹಾಲಿ ಚಿಂತಾಮಣಿ ನಗರ ಯೋಜನಾ ಪ್ರಾಧಿಕಾರದ ವಶದಲ್ಲಿದ್ದ ಆಸ್ತಿ ಮತ್ತು ಹೊಣೆಗಾರಿಕೆಯನ್ನು, ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ, ಸದರಿ ನಗರಾಭಿವೃದ್ಧಿ ಪ್ರಾಧಿಕಾರ ರಚಿತವಾದ ದಿನಾಂಕದಿಂದ ಜಾರಿಗೆ ಬರುವಂತೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ),
ನಗರಾಭಿವೃದ್ಧಿ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH